ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಬುಧವಾರ, ೦೧, ಜುಲೈ , ೨೦೨೬ (ಆಷಾಢ, ೧೦, ಶಕವರ್ಷ, ೧೯೪೮)	ಸಂಚಿಕೆ ೧೨೬
Volume - 161	BENGALURU, WEDNESDAY, 01, JULY, 2026 (ASHADHA, 10, SHAKAVARSHA, 1948)	Issue 126

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ.

ಓದಲಾಗಿದೆ: (1) ದಿನಾಂಕ: 23.08.2024ರ ಸರ್ಕಾರಿ ಆದೇಶ ಸಂಖ್ಯೆ: ಆಇ 21 ಎಸ್ಆರ್‌ಪಿ 2024

(2) ದಿನಾಂಕ: 27.11.2024ರ ಸರ್ಕಾರಿ ಆದೇಶ ಸಂಖ್ಯೆ: ಆಇ 43 ಎಸ್ಆರ್‌ಪಿ 2024

(3) ದಿನಾಂಕ: 07.05.2025ರ ಸರ್ಕಾರಿ ಆದೇಶ ಸಂಖ್ಯೆ: ಆಇ 8 ಎಸ್ಆರ್‌ಪಿ 2025

(4) ದಿನಾಂಕ:15.10.2025ರ ಸರ್ಕಾರಿ ಆದೇಶ ಸಂಖ್ಯೆ:ಆಇ 18 ಎಸ್ಆರ್‌ಪಿ 2025

(5) ಭಾರತ ಸರ್ಕಾರದ ದಿನಾಂಕ:22.04.2026ರ ಅಧಿಕೃತ ಜ್ಞಾಪನ ಸಂಖ್ಯೆ:1/1(i)/2026-E.II(B)

ಸರ್ಕಾರದ ಆದೇಶ ಸಂಖ್ಯೆ: ಆಇ 5 ಎಸ್ಆರ್‌ಪಿ 2026

ಬೆಂಗಳೂರು, ದಿನಾಂಕ: 11 ನೇ ಮೇ 2026

2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ಪಡೆಯುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ **1ನೇ ಜನವರಿ 2026** ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **ಶೇಕಡ 14.25** ರಿಂದ **ಶೇಕಡ 15.75** ಗೆ ಪರಿಷ್ಕರಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ತುಟ್ಟಿಭತ್ಯೆಯ ಉದ್ದೇಶಕ್ಕಾಗಿ "ಮೂಲ ವೇತನ" ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ,

(ಅ) 2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ,

(ಆ) 2024ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ನಿಯಮ 3(ಸಿ) ಯನ್ನು ಓದಿಕೊಂಡು 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ,

(ಇ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ.

3. ತುಟ್ಟಿ ಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

4. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೂ ಸಹ **ದಿನಾಂಕ 1ನೇ ಜನವರಿ 2026** ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರಗಳನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಪ್ರಸಕ್ತ **ಶೇಕಡ 14.25 ರಿಂದ ಶೇಕಡ 15.75** ಕ್ಕೆ ಹೆಚ್ಚಿಸಿ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

5. ತುಟ್ಟಿ ಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಕ.ನಾ.ಸೇ(ಪ.ವೇ) ನಿಯಮಗಳು, 2024ರ ನಿಯಮ 3ರಲ್ಲಿ ಸೂಚಿಸಿರುವ ಮತ್ತು ಸದರಿ ನಿಯಮದಡಿ ಹೊರಡಿಸಿರುವ ಆದೇಶಗಳಲ್ಲಿ ಸೂಚಿಸಿರುವ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

6. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳ ನಿವೃತ್ತ ನೌಕರರುಗಳಿಗೂ ಸಹ ಈ ಆದೇಶಗಳು ಅನ್ವಯಿಸುತ್ತವೆ.

7. ಸರ್ಕಾರದ ಮತ್ತು ಜಿಲ್ಲಾ ಪಂಚಾಯತ್‌ಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶ ಅನ್ವಯಿಸುತ್ತದೆ.

8. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ನೌಕರರಿಗೆ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಗಳ ನ್ಯಾಯಾಂಗ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

9. ಈ ಆದೇಶದ ಮೇರೆಗೆ ಲಭ್ಯವಿರುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

10. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

11. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆ ಬಾಕಿ ಮೊತ್ತವನ್ನು, 2026ರ **ಮೇ ತಿಂಗಳ** ವೇತನ/ಪಿಂಚಣಿ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

12. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ.ಕೆ)

ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

PROCEEDINGS OF THE GOVERNMENT OF KARNATAKA

Sub:- Revision of the rates of Dearness Allowance-reg.

READ: 1. G.O. No. FD 21 SRP 2024 dated: 23.08.2024.
2. G.O. No. FD 43 SRP 2024 dated: 27.11.2024.
3. G.O. No. FD 8 SRP 2025 dated: 07.05.2025.
4. G.O. No. FD 18 SRP 2025 dated: 15.10.2025.
5. GOI O.M. No. 1/1(i)/2026-E.II(B)dated: 22.04.2026.

GOVERNMENT ORDER NO. FD 5 SRP 2026, BANGALORE, DATED 11th May 2026.

Government are pleased to enhance the rates of Dearness Allowance payable to the State Government Employees in the 2024 Revised State Pay Scales from the existing **14.25% to 15.75%** of the Basic Pay with effect from **1st January 2026**.

2. For the purpose of this order, the term 'Basic Pay' means, pay drawn by a Government Employee in the scale of pay applicable to the post held by him and includes:

a. Stagnation increment, if any, granted to him above the maximum of the scale of pay in 2024 Revised Pay Scales;
b. Personal Pay, if any, granted to him under sub-rule (3) of Rule 7 read with Rule 3(c) of the Karnataka Civil Services (Revised Pay) Rules, 2024;
c. Additional increment, if any, granted to him above the maximum of the scale of pay.

3. For the purpose of grant of dearness allowance the basic pay shall not include any emoluments other than those specified above.

4. Government are also pleased to enhance the rates of Dearness Allowance to the State Government Pensioners/Family Pensioners as well as to the

Pensioners/Family Pensioners of the Aided Educational Institutions whose Pension/ Family Pension is paid out of the Consolidated Fund of the State from the existing **14.25% to 15.75%** of the Basic Pension/Family Pension with effect from **1st January 2026**.

5. For the purpose of grant of dearness allowance the basic pension/family pension shall not include any other emoluments not specified in Rule 3 of KCS(RP) Rules, 2024 and orders issued thereunder.

6. These orders are also applicable to the retired employees of the UGC/AICTE/ICAR scales of pay.

7. These orders will apply to the full time Government Employees, Employees of Zilla Panchayats, Work Charged Employees on regular time scales of pay, full time Employees of the Aided Educational Institutions and Universities on regular time scales of pay.

8. Separate orders will be issued in respect of Employees on UGC/AICTE/ICAR scales of pay and in respect of Judicial Officers on NJPC Pay Scale.

9. The increase in Dearness Allowance admissible under this order is payable in cash until further orders.

10. The payment on account of revision of dearness allowance involving fractions of 50 paise and above shall be rounded off to the next rupee and fractions less than 50 paise shall be ignored.

11. The arrears of dearness allowance admissible under this order shall not be payable before the date of disbursement of the salary/Pension for the month of May 2026.

12. The dearness allowance will be shown as a distinct element of remuneration and shall not be treated as pay for any purpose.

BY ORDER AND IN THE NAME OF THE GOVERNOR OF KARNATAKA,

(UMA.K.)
Joint Secretary to Government,
Finance Department (Services-2).

PR-221

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 40 ವರ್ಷ ಮೀರಿದ ರಾಜ್ಯ ಸರ್ಕಾರಿ ನೌಕರರಿಗೆ ವಾರ್ಷಿಕ ವೈದ್ಯಕೀಯ ತಪಾಸಣೆ (Annual Health Checkup) ಸೌಲಭ್ಯವನ್ನು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿಯಲ್ಲಿ (KASS) ಒದಗಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ: 05.09.2022 ಮತ್ತು 23.09.2025

ಪ್ರಸ್ತಾವನೆ:

1] ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅರ್ಹ ಅವಲಂಬಿತ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯಗಳನ್ನು ಕಲ್ಪಿಸಲು ರಾಜ್ಯ ಸರ್ಕಾರವು ದಿನಾಂಕ: 01.10.2025 ರಿಂದ ಜಾರಿಗೆ ತಂದಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಗೆ ಒಟ್ಟು 3,76,955 ನೌಕರರು opt-in ಆಗಿದ್ದು, 23,081 ನೌಕರರು Opt-out ಆಗಿರುತ್ತಾರೆ.

2] ಆಧುನಿಕ ಜೀವನ ಶೈಲಿಯು ಒತ್ತಡದಿಂದ ಕೂಡಿರುವುದರಿಂದ ಆರೋಗ್ಯಕರ ಜೀವನ ನಡೆಸಲು ದೇಹಕ್ಕೆ ಬೇಕಾದ ವ್ಯಾಯಾಮದ ಕೊರತೆ ಹಾಗೂ ಸರ್ಕಾರಿ ನೌಕರರಿಗೆ ಇರುವ ಕೆಲಸದ ಒತ್ತಡದಿಂದಾಗಿ 40 ವರ್ಷ ವಯಸ್ಸು ಮೀರಿದ ನೌಕರರು ಸಾಮಾನ್ಯವಾಗಿ ಮಧುಮೇಹ, ರಕ್ತದೊತ್ತಡದಂತಹ ಕಾಯಿಲೆಗಳಿಂದ ಬಳಲುತ್ತಿರುವ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿದ್ದು ಇಂತಹ ಕಾಯಿಲೆಗಳಿಗೆ ತುತ್ತಾಗಿರುವ ಅರಿವು ಇಲ್ಲದೇ ಅವರು ಹೃದಯಾಘಾತ, ಪಾರ್ಶ್ವವಾಯು ಮುಂತಾದ ಅನೇಕ ರೋಗಗಳಿಗೆ ಒಳಗಾಗುತ್ತಿರುವುದು ಕಂಡುಬಂದಿರುವ ಕಾರಣ ಅವರು ಸೂಕ್ತ ಸಮಯದಲ್ಲಿ ಕೆಲವು ಅತ್ಯಗತ್ಯ ಸಾಮಾನ್ಯ ವೈದ್ಯಕೀಯ ತಪಾಸಣೆಗಳನ್ನು ಮಾಡಿಸಿಕೊಂಡಲ್ಲಿ ಆರಂಭದ ಹಂತದಲ್ಲಿ ಅವಶ್ಯಕ ಔಷಧೋಪಚಾರಗಳನ್ನು ಪಡೆದು ಇಂತಹ

ಗಂಭೀರ, ಅಪಾಯಕರ ಅನಾರೋಗ್ಯ ಸಮಸ್ಯೆಗಳನ್ನು ತಡೆಗಟ್ಟಿ ಆರೋಗ್ಯವನ್ನು ರಕ್ಷಿಸಿಕೊಳ್ಳಬಹುದಾಗಿರುವುದರಿಂದ ಕೇಂದ್ರ ಸರ್ಕಾರಿ ನೌಕರರಿಗೆ ಒದಗಿಸಲಾಗಿರುವ Preventive Health Checkupನ ಮಾದರಿಯಲ್ಲಿ "Annual Health Checkup" ಸೌಲಭ್ಯವನ್ನು ರಾಜ್ಯ ಸರ್ಕಾರಿ ನೌಕರರಿಗೂ ಒದಗಿಸುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರ ಅಭಿಪ್ರಾಯವನ್ನು ಪಡೆದು ಪರಿಶೀಲಿಸಿ, ಕೇಂದ್ರ ಸರ್ಕಾರದ ಮಾದರಿಯಲ್ಲಿ ವಾರ್ಷಿಕ ಆರೋಗ್ಯ ತಪಾಸಣೆಯನ್ನು KASS ಯೋಜನೆಯಡಿ ನೋಂದಾಯಿತವಾಗಿರುವ (opt-in) ಸರ್ಕಾರಿ ನೌಕರರಿಗೆ ಒದಗಿಸುವುದು ಅವಶ್ಯಕತೆ ಇರುವುದನ್ನು ಸರ್ಕಾರವು ಪರಿಗಣಿಸಿ, ರಾಜ್ಯ ಸರ್ಕಾರವು ದಿನಾಂಕ: 01.10.2025 ರಿಂದ ಜಾರಿಗೆ ತಂದಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಗೆ ಒಳಪಟ್ಟಿರುವ (Opt-in) ಎಲ್ಲಾ ಸರ್ಕಾರಿ ನೌಕರರಿಗೆ ವಾರ್ಷಿಕ ವೈದ್ಯಕೀಯ ತಪಾಸಣೆ ಸೌಲಭ್ಯವನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ, ಈ ಸಂಬಂಧ ದಿನಾಂಕ: 05.09.2022ರ ಆದೇಶದಲ್ಲಿ ನೀಡಲಾಗಿರುವ ಸೂಚನೆಗಳನ್ನು ಭಾಗಶ: ಮಾರ್ಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020(ಭಾಗ-23),
ದಿನಾಂಕ: 22.06.2026.

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ದಿನಾಂಕ: 01.10.2025 ರಿಂದ ಜಾರಿಗೆ ತಂದಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಗೆ ಒಳಪಟ್ಟಿರುವ (Opt-in) ಸರ್ಕಾರಿ ನೌಕರರಿಗೆ 'ವಾರ್ಷಿಕ ವೈದ್ಯಕೀಯ ತಪಾಸಣೆ' ರಡಿ 40 ವರ್ಷ ಮೀರಿದ ಸರ್ಕಾರಿ ನೌಕರರು ಕ್ಯಾಲೆಂಡರ್ ವರ್ಷದಲ್ಲಿ ಒಂದು ಬಾರಿ ಈ ಕೆಳಗೆ ನಮೂದಿಸಿರುವ ಕೆಲವು ನಿರ್ದಿಷ್ಟ ಹಾಗೂ ಅತ್ಯಾವಶ್ಯಕ ವೈದ್ಯಕೀಯ ತಪಾಸಣೆಗಳನ್ನು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿ ನಗದು ರಹಿತವಾಗಿ ಪಡೆಯಲು, ಕೆಲವೊಂದು ಷರತ್ತಿಗೊಳಪಟ್ಟು ಅವಕಾಶ ಕಲ್ಪಿಸಿ ಆದೇಶಿಸಿದೆ:-

A. EXAMINATION

I		**GENERAL EXAMINATION**
	(i)	Pulse Rate
	(ii)	Blood Pressure
	(iii)	Temperature
	(iv)	Respiratory Rate
	(v)	Weight
	(vi)	Body Mass Index (BMI)
II		**SYSTEMIC EXAMINATION:**
	(i)	Respiratory System
	(ii)	Cardiovascular System (CVS)
	(iii)	Abdomen
	(iv)	Central Nervous System (CNS)
	(v)	Locomotor System
	(vi)	Dental Examination
III		**EYE EXAMINATION:**
	(i)	Visual Equity (Near & Distant) and Refraction
	(ii)	Tonometry
	(iii)	Fundus Examination
IV		**ENT EXAMINATION**

V			**GYNECOLOGICAL EXAMINATION (WOMEN)**
	a		PELVIC EXAMINATION
		(i)	Local examination
		(ii)	Per vaginum examination
		(iii)	Per speculum
	b		BREAST EXAMINATION
VI			**SURGICAL EXAMINATION**

B. INVESTIGATIONS

I			**HEMOGRAM**
	(i)		Hemoglobin
	(ii)		Total leucocyte counts
	(iii)		Differential Leucocyte counts
		a.	Polymorphs
		b.	Lymphocytes
		c.	Eosinophils
		d.	Basophils
		e.	Monocytes
	(iv)		Peripheral Smear
II			**URINE EXAMINATION**
		(i)	Routine
		(ii)	Microscopic examination
III			**BLOOD GLUCOSE**
		(i)	Fasting
		(ii)	Post-prandial
		(iii)	HBA1C
IV			**LIPID PROFILE**
		(i)	Total cholesterol
		(ii)	HDL cholesterol
		(iii)	LDL cholesterol
		(iv)	VLDL cholesterol
		(v)	Triglycerides
V			**LIVER FUNCTION TESTS**
		(i)	Serum bilirubin (Total)
		(ii)	Serum bilirubin (Direct)
		(iii)	ALT/SGPT
		(iv)	AST/SGOT
		(v)	GGT
		(vi)	Serum Alkaline phosphatase
		(vii)	Total Protein
		(viii)	Albumin and Globulin ratio
VI			**KIDNEY FUNCTION TESTS**
		(i)	Blood Urea
		(ii)	Serum Creatinine
		(iii)	Serum Uric Acid
		(iv)	Serum Electrolytes (Sodium & Potassium)
VII			**SERUM TSH, T3, T4**
VIII			**SPECIAL TESTS**
		(i)	For Male: PSA
		(ii)	For Female: PAP Smear

(iii) X-ray chest PA view
(iv) ECG
(v) Ultrasound Whole Abdomen with Prostate & Post Voiding Residual Urine Volume (Male)
(vi) Ultrasound Whole Abdomen with Pelvis (Female)
(vii) Mammogram (Female)

ಷರತ್ತುಗಳು:

i. ಸ್ವ-ಇಚ್ಛೆಯಿಂದ ಯೋಜನೆಗೆ ಒಳಪಡದ (Opt-out ಆದ) ಸರ್ಕಾರಿ ನೌಕರರು ಈ ಸೌಲಭ್ಯಕ್ಕೆ ಅರ್ಹರಾಗುವುದಿಲ್ಲ.
ii. ವಾರ್ಷಿಕ ಆರೋಗ್ಯ ತಪಾಸಣೆ ಸರ್ಕಾರಿ ನೌಕರರಿಗೆ ಮಾತ್ರ ಅನ್ವಯವಾಗುತ್ತದೆ. ಸರ್ಕಾರಿ ನೌಕರರ ಕುಟುಂಬದ ಅವಲಂಬಿತ ಸದಸ್ಯರು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ.
iii. ಈ ತಪಾಸಣೆಗಳನ್ನು ಸರ್ಕಾರಿ ಆಸ್ಪತ್ರೆ (ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳನ್ನು ಒಳಗೊಂಡಂತೆ) ಹಾಗೂ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿ (KASS) ನೋಂದಾಯಿಸಲ್ಪಟ್ಟಿರುವ ಖಾಸಗಿ ಆಸ್ಪತ್ರೆಗಳಲ್ಲಿ ಮಾತ್ರ ಪಡೆಯತಕ್ಕದ್ದು.
iv. ಈ ತಪಾಸಣೆಗಳನ್ನು ಒಂದೇ ಸಂಸ್ಥೆಯಲ್ಲಿ ಪಡೆದು ಒಂದೇ ಕ್ಲೇಮಿನಲ್ಲಿ ಅವುಗಳನ್ನು ಇತ್ಯರ್ಥಪಡಿಸತಕ್ಕದ್ದು.
v. ನಿಗದಿಪಡಿಸಿರುವ ವಾರ್ಷಿಕ ವೈದ್ಯಕೀಯ ತಪಾಸಣೆಗಳಿಗೆ ರೂ. 2000/- (ಪುರುಷ ನೌಕರರಿಗೆ) ರೂ. 2,200/- (ಮಹಿಳಾ ನೌಕರರಿಗೆ) ಸಂಚಿತ ದರಗಳನ್ನು (Consolidated Rates) ನಿಗದಿಪಡಿಸಲಾಗಿದೆ. ವಿವಿಧ ತಪಾಸಣೆಗಳಿಗೆ ಸರ್ಕಾರ ನಿಗದಿಪಡಿಸಿದ ಗರಿಷ್ಠ ಮೊತ್ತದ ಮಿತಿಗೊಳಪಟ್ಟು ಮಂಜೂರಾತಿ ನೀಡತಕ್ಕದ್ದು.
vi. ವಾರ್ಷಿಕ ವೈದ್ಯಕೀಯ ತಪಾಸಣೆಗಳನ್ನು KASS ಯೋಜನೆಯಡಿ ಅಳವಡಿಸಿಕೊಳ್ಳಲು ಹಾಗೂ ಈ ಸಂಬಂಧ ನೋಂದಾಯಿತ ಖಾಸಗಿ ಆಸ್ಪತ್ರೆಗಳೊಂದಿಗೆ ಸೂಕ್ತ ಒಡಂಬಡಿಕೆಯನ್ನು ಮಾಡಿಕೊಳ್ಳಲು ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 93 ವೆಚ್ಚ-12/2026, ದಿನಾಂಕ: 02.06.2026ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಶಿವಶಂಕರ್)
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-3)

PR-222

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: LAW-LCE/214/2022 ದಿನಾಂಕ: 29.10.2022.
2. ಸರ್ಕಾರಿ ಆದೇಶ ಸಂಖ್ಯೆ: ಆಇ 44 ಎಸ್‌ಆರ್‌ಪಿ 2022 ದಿನಾಂಕ: 22.11.2022
3. ಸರ್ಕಾರಿ ಆದೇಶ ಸಂಖ್ಯೆ: ಆಇ 11 ಎಸ್‌ಆರ್‌ಪಿ 2023 ದಿನಾಂಕ: 01.06.2023
4. ಸರ್ಕಾರಿ ಆದೇಶ ಸಂಖ್ಯೆ: ಆಇ 11 ಎಸ್‌ಆರ್‌ಪಿ 2023(ಭಾ) ದಿನಾಂಕ: 02.06.2023
5. ಸರ್ಕಾರಿ ಆದೇಶ ಸಂಖ್ಯೆ: LAW-LCE/214/2022(ಭಾ-5) ದಿನಾಂಕ: 24.08.2023.
6. ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2023 ದಿನಾಂಕ:27.10.2023
7. ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2024 ದಿನಾಂಕ:15.03.2024
8. ಸರ್ಕಾರಿ ಆದೇಶ ಸಂಖ್ಯೆ: ಆಇ 46 ಎಸ್‌ಆರ್‌ಪಿ 2024 ದಿನಾಂಕ:28.11.2024
9. ಸರ್ಕಾರಿ ಆದೇಶ ಸಂಖ್ಯೆ: ಆಇ 11 ಎಸ್‌ಆರ್‌ಪಿ 2025 ದಿನಾಂಕ: 08.05.2025
10. ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2025 ದಿನಾಂಕ:18.10.2025.
11. ಭಾರತ ಸರ್ಕಾರದ ದಿನಾಂಕ: 22.04.2026ರ ಅಧಿಕೃತ ಜ್ಞಾಪನ ಸಂಖ್ಯೆ:1/1(i)/2026-E.II(B).

ಸರ್ಕಾರಿ ಆದೇಶ ಸಂಖ್ಯೆ: ಆಇ 6 ಎಸ್‌ಆರ್‌ಪಿ 2026

ಬೆಂಗಳೂರು, ದಿನಾಂಕ: 14ನೇ ಮೇ 2026

2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು 1ನೇ ಜನವರಿ 2026ರಿಂದ ಜಾರಿಗೆ ಬರುವಂತೆ ಪ್ರಸ್ತುತ ಮೂಲ ವೇತನದ **58% ರಿಂದ 60% ಗೆ** ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ನಿವೃತ್ತ ನ್ಯಾಯಾಂಗ ಅಧಿಕಾರಿಗಳು / ಕುಟುಂಬ ನಿವೃತ್ತಿ ವೇತನದಾರರುಗಳ ತುಟ್ಟಿ ಭತ್ಯೆಯ ದರಗಳನ್ನು ಸಹ **1ನೇ ಜನವರಿ 2026** ರಿಂದ ಜಾರಿಗೆ ಬರುವಂತೆ ಮೂಲ ಪಿಂಚಣಿ/ ಕುಟುಂಬ ಪಿಂಚಣಿಯ **58% ರಿಂದ 60% ಗೆ** ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

3. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಮತ್ತು ಮೂಲ ಪಿಂಚಣಿ/ಕುಟುಂಬ ಪಿಂಚಣಿ ಎಂದರೆ ಸಂದರ್ಭಾನುಸಾರ, ನ್ಯಾಯಾಂಗ ಅಧಿಕಾರಿಯು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಪಡೆಯುವ ಮೂಲ ವೇತನ ಮತ್ತು ಪರಿಷ್ಕೃತ ಮೂಲ ಪಿಂಚಣಿ/ಕುಟುಂಬ ಪಿಂಚಣಿ.

4. ಸಂದರ್ಭಾನುಸಾರ ಮೂಲ ವೇತನ ಅಥವಾ ಮೂಲ ಪಿಂಚಣಿ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ವೇತನ ಅಥವಾ ಪಿಂಚಣಿಗೆ ಸೇರಿಸತಕ್ಕದ್ದಲ್ಲ.

5. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

6. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆ ಬಾಕಿ ಮೊತ್ತವನ್ನು, 2026ರ ಮೇ ತಿಂಗಳ ವೇತನ/ಪಿಂಚಣಿ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ.ಕೆ.)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

PROCEEDINGS OF THE GOVERNMENT OF KARNATAKA

Sub:- Revision of the rates of Dearness Allowance in respect of the State Judicial Service officers on 2016 Revised NJPC Pay Scales - reg.

READ:1. G.O. No. LAW-LCE/214/2022 dated: 29.10.2022.
2. G.O. No. FD 44 SRP 2022 dated:22.11.2022.
3. G.O. No. FD 11 SRP 2023 dated:01.06.2023.
4. G.O. No. FD 11 SRP 2023(P) dated:02.06.2023.
5. G.O. No. LAW-LCE/214/2022 (P-5) dated:24.08.2023.
6. G.O. No. FD 20 SRP 2023 dated:27.10.2023.
7. G.O. No. FD 20 SRP 2024 dated:15.03.2024.
8. G.O. No. FD 46 SRP 2024 dated:28.11.2024.
9. G.O. No. FD 11 SRP 2025 dated: 08.05.2025.
10. G.O.No. FD 20 SRP 2025 dated: 18.10.2025.
11. GOI O.M. No.1/1(i)/2026-E.II(B) dated: 22.04.2026.

GOVERNMENT ORDER NO. FD 6 SRP 2026,
BENGALURU, DATED 14th MAY 2026.

Government are pleased to revise the rates of Dearness Allowance in respect of the serving State Judicial Service Officers on 2016 Revised NJPC Scales of Pay from the existing rate of **58% to 60%** of the Basic Pay with effect from **1st January 2026.**

2. Government are also pleased to revise the Dearness Allowance rates payable to the retired Judicial Officers / Family Pensioners from the existing **58% to 60%** of the Basic Pension / Family Pension as the case may be with effect from **1st January 2026.**

3. For the purpose of this order, the term 'Basic Pay' and Basic Pension / Family Pension means, the Basic Pay drawn by the serving Judicial Officer in the 2016 Revised NJPC Pay Scale applicable to the post held by him and revised Basic Pension / Family Pension respectively.

4. Basic Pay or Basic Pension shall not include any other emoluments not classed as pay or pension as the case may be.

5. The Dearness Allowance admissible under this order is payable in cash until further orders.

6. The arrears of Dearness Allowance admissible under this order shall not be payable before the date of disbursement of the salary/pension for the month of May 2026.

7. The payment on account of Dearness Allowance involving fractions of 50 paise and above shall be rounded off to the next rupee and fractions less than 50 paise shall be ignored.

8. The Dearness Allowance will be shown as a distinct element of remuneration and will not be treated as pay for any purpose.

BY ORDER AND IN THE NAME OF THE GOVERNOR OF KARNATAKA,

(UMA.K.)
Joint Secretary to Government,
Finance Department (Services-2).

PR-223

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳಿಗೆ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ:- 1. ಸ.ಆ. ಸಂಖ್ಯೆ: ಆಇ 3 ಎಸ್ಆರ್‌ಪಿ 2019 ದಿನಾಂಕ:15.05.2019.
2. ಸ.ಆ. ಸಂಖ್ಯೆ: ಆಇ 16 ಎಸ್ಆರ್‌ಪಿ 2019 ದಿನಾಂಕ: 25.10.2019.
3. ಸ.ಆ. ಸಂಖ್ಯೆ: ಆಇ 10 ಎಸ್ಆರ್‌ಪಿ 2020 ದಿನಾಂಕ: 05.05.2020.
4. ಸ.ಆ. ಸಂಖ್ಯೆ: ಆಇ 19 ಎಸ್ಆರ್‌ಪಿ 2021 ದಿನಾಂಕ: 29.07.2021.
5. ಸ.ಆ. ಸಂಖ್ಯೆ: ಆಇ 31 ಎಸ್ಆರ್‌ಪಿ 2021 ದಿನಾಂಕ: 27.10.2021.
6. ಸ.ಆ. ಸಂಖ್ಯೆ: ಆಇ 23 ಎಸ್ಆರ್‌ಪಿ 2022 ದಿನಾಂಕ: 11.04.2022
7. ಸ.ಆ. ಸಂಖ್ಯೆ: ಆಇ 41 ಎಸ್ಆರ್‌ಪಿ 2022 ದಿನಾಂಕ: 12.10.2022
8. ಸ.ಆ. ಸಂಖ್ಯೆ: ಆಇ 10 ಎಸ್ಆರ್‌ಪಿ 2023 ದಿನಾಂಕ: 31.05.2023
9. ಸ.ಆ. ಸಂಖ್ಯೆ: ಆಇ 21 ಎಸ್ಆರ್‌ಪಿ 2023 ದಿನಾಂಕ: 26.10.2023

10. ಸ.ಆ. ಸಂಖ್ಯೆ: ಆಇ 19 ಎಸ್ಆರ್‌ಪಿ 2024 ದಿನಾಂಕ: 14.03.2024
11. ಸ.ಆ. ಸಂಖ್ಯೆ: ಆಇ 45 ಎಸ್ಆರ್‌ಪಿ 2024 ದಿನಾಂಕ: 28.11.2024
12. ಸ.ಆ. ಸಂಖ್ಯೆ: ಆಇ 10 ಎಸ್ಆರ್‌ಪಿ 2025 ದಿನಾಂಕ: 08.05.2025
13. ಸ.ಆ. ಸಂಖ್ಯೆ: ಆಇ 19 ಎಸ್ಆರ್‌ಪಿ 2025 ದಿನಾಂಕ: 24.10.2025
14. ಭಾರತ ಸರ್ಕಾರದ ದಿನಾಂಕ:22.04.2026ರ ಅಧಿಕೃತ ಜ್ಞಾಪನ ಸಂಖ್ಯೆ:1/1(i)/2026-E.II (B).

ಸರ್ಕಾರಿ ಆದೇಶ ಸಂಖ್ಯೆ: ಆಇ 7 ಎಸ್ಆರ್‌ಪಿ 2026
ಬೆಂಗಳೂರು, ದಿನಾಂಕ: 26ನೇ ಮೇ 2026

2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳ ತುಟ್ಟಿಭತ್ಯೆಯ ದರಗಳನ್ನು **1ನೇ ಜನವರಿ 2026** ರಿಂದ ಜಾರಿಗೆ ಬರುವಂತೆ ಪರಿಷ್ಕೃತ ಮೂಲ ವೇತನದ **ಶೇಕಡ 58 ರಿಂದ ಶೇಕಡ 60ಕ್ಕೆ** ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ಸರ್ಕಾರಿ ನೌಕರನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಪಡೆಯುತ್ತಿರುವ ಮೂಲ ವೇತನ.

3. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು, ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಪೂರ್ಣಕಾಲಿಕ ನೌಕರರಿಗೆ ಸಹ ಈ ಆದೇಶಗಳು ಅನ್ವಯಿಸುತ್ತವೆ.

4. ವೇತನ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ಮೂಲ ವೇತನಕ್ಕೆ ಸೇರಿಸತಕ್ಕದ್ದಲ್ಲ.

5. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

6. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನಿವೃತ್ತ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

7. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆ ಬಾಕಿ ಮೊತ್ತವನ್ನು, 2026ರ ಮೇ ತಿಂಗಳ ವೇತನ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

8. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

೨. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ.ಕೆ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

PROCEEDINGS OF THE GOVERNMENT OF KARNATAKA

Sub:- Revision of the rates of Dearness Allowance payable to the teaching and equivalent cadre staff on 2016 revised **UGC/ICAR/AICTE** scales of pay - reg.

READ: - 1. G.O. No. FD 3 SRP 2019 dated: 15.05.2019.
2. G.O. No.FD 16 SRP 2019 dated: 25.10.2019.
3. G.O. No.FD 10 SRP 2020 dated: 05.05.2020.
4. G.O. No. FD 19 SRP 2021 dated: 29.07.2021.
5. G.O. No. FD 31 SRP 2021 dated: 27.10.2021
6. G.O. No.FD 23 SRP 2022 dated: 11.04.2022.
7. G.O. No.FD 41 SRP 2022 dated: 12.10.2022.
8. G.O. No.FD 10 SRP 2023 dated: 31.05.2023.
9. G.O. No.FD 21 SRP 2023 dated: 26.10.2023.
10. G.O. No.FD 19 SRP 2024 dated: 14.03.2024.
11. G.O. No.FD 45 SRP 2024 dated: 28.11.2024.
12. G.O. No.FD 10 SRP 2025 dated: 08.05.2025.
13. G.O. No.FD 19 SRP 2025 dated: 24.10.2025.
14. GOI O.M. No.1/1(i)/2026-E-II(B) dated:22.04.2026.

GOVERNMENT ORDER NO. FD 7 SRP 2026
BENGALURU, DATED 26TH MAY 2026

Government are pleased to revise the rates of dearness allowance payable to the teaching and equivalent cadre staff on 2016 Revised UGC/ICAR/AICTE Pay Scales from the existing **58% to 60%** of the revised Basic Pay with effect from **1st January, 2026.**

2. For the purpose of this order, the term 'Basic Pay' means, the basic pay drawn by the Government employee in the 2016 Revised UGC/ICAR/AICTE pay scale applicable to the post held by him.

3. These orders will also apply to the fulltime employees on UGC/ICAR/AICTE Scales of Pay working in Universities, Government/Aided Educational Institutions, Government Autonomous Institutions etc.

4. Basic Pay shall not include any other emoluments not classed as pay.

5. The Dearness Allowance admissible under this order is payable in cash until further orders.

6. These orders are not applicable to retired employees on UGC/ ICAR/ AICTE Scales of Pay.

7. The arrears of Dearness Allowance admissible under this order shall not be payable before the disbursement of salary for the month of May 2026.

8. The payment on account of Dearness Allowance involving fractions of 50 paise and above shall be rounded off to the next rupee and fractions less than 50 paise shall be ignored.

9. The Dearness Allowance will be shown as a distinct element of remuneration and will not be treated as pay for any purpose.

BY ORDER AND IN THE NAME OF THE
GOVERNOR OF KARNATAKA,

(UMA.K.)
Joint Secretary to Government,
Finance Department (Services-2).

PR-224

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ., ಬೆಂಗಳೂರು ಈ ಮಹಾಮಂಡಳದ ಆಡಳಿತಾಧಿಕಾರಿ ಅವಧಿ ವಿಸ್ತರಿಸುವ ಬಗ್ಗೆ.

ಓದಲಾಗಿದೆ:
1. ಸಹಕಾರ ಸಂಘಗಳ ಅಪರ ನಿಬಂಧಕರು(ಕೈಗಾರಿಕೆ ಮತ್ತು ಹೈನುಗಾರಿಕೆ) ಇವರ ಆದೇಶ ಸಂಖ್ಯೆ:ಅನಿ/ಡಿಎವೈ-2/27/ಆ.ನೇ/2025-26, ದಿನಾಂಕ: 03-06-2025.
2. ಸರ್ಕಾರದ ಆದೇಶ ಸಂಖ್ಯೆ: ಸಿಒ 5 ಸಿಸಿಬಿ 2025, ದಿನಾಂಕ:31-12-2025
3. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ:ಅನಿ/ಡಿಎವೈ-2/27/ಆ.ನೇ/2025-26, ದಿನಾಂಕ:09-06-2026.

***

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಾಂಕ (1)ರ ಸಹಕಾರ ಸಂಘಗಳ ಅಪರ ನಿಬಂಧಕರು(ಕೈಗಾರಿಕೆ ಮತ್ತು ಹೈನುಗಾರಿಕೆ) ಇವರ ಆದೇಶದಲ್ಲಿ, ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು, ಈ ಮಹಾಮಂಡಳದ ಆಡಳಿತ ಮಂಡಳಿ ಅವಧಿಯು ದಿನಾಂಕ:07-07-2024 ರಂದು ಮುಕ್ತಾಯಗೊಂಡಿದ್ದು ಹೊಸ ಆಡಳಿತ ಮಂಡಳಿ ರಚನೆಯಾಗದ ಕಾರಣ ಮಹಾಮಂಡಳದ ಆಡಳಿತ ಮಂಡಳಿ ಸ್ಥಾನದಲ್ಲಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 28-ಎ(5) ರನ್ವಯ ಶ್ರೀ ಟಿ.ಹೆಚ್.ಎಂ.ಕುಮಾರ್, ಭಾ.ಆ.ಸೇ, ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ ಬೆಂಗಳೂರು, ಇವರನ್ನು 6 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಕ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ, ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು ಈ ಮಹಾಮಂಡಳದ ಆಡಳಿತಾಧಿಕಾರಿ ಅವಧಿಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 121ರನ್ವಯ ದಿನಾಂಕ:04.12.2025 ರಿಂದ ಮುಂದಿನ 06 ತಿಂಗಳವರೆಗೆ ಅಥವಾ ಆಡಳಿತ ಮಂಡಳಿಗೆ ಚುನಾವಣೆ ನಡೆದು ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವವರೆಗೆ ಈ ಎರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು ಈ ಮಹಾಮಂಡಳದ ಆಡಳಿತಾಧಿಕಾರಿ ಅವಧಿಯು ದಿನಾಂಕ:03-06-2026ಕ್ಕೆ ಮುಕ್ತಾಯಗೊಂಡಿರುತ್ತದೆ. ಆದುದರಿಂದ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು ಈ ಮಹಾಮಂಡಳದ ಆಡಳಿತಾಧಿಕಾರಿ ಅವಧಿಯನ್ನು ಮುಂದಿನ ಆರು ತಿಂಗಳವರೆಗೆ ಅಥವಾ ಆಡಳಿತ ಮಂಡಳಿಗೆ ಚುನಾವಣೆ ನಡೆದು ನೂತನ ಆಡಳಿತ ಮಂಡಳಿ ರಚನೆಯಾಗಿ ಅಧಿಕಾರ ಹಸ್ತಾಂತರಿಸುವವರೆಗೆ ಈ ಎರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು ಈ ಮಹಾಮಂಡಳಕ್ಕೆ ನೇಮಿಸಲಾಗಿರುವ

ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವುದು ಅವಶ್ಯಕವಿರುವುದನ್ನು ಸರ್ಕಾರವು ಮನಗಂಡು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 5 ಸಿಸಿಬಿ 2025, ಬೆಂಗಳೂರು, ದಿನಾಂಕ:23.06.2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 121ರಡಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರದನ್ವಯ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ., ಬೆಂಗಳೂರು ಈ ಮಹಾಮಂಡಳದ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:04.06.2026 ರಿಂದ ಮುಂದಿನ 06 ತಿಂಗಳವರೆಗೆ ಅಥವಾ ಆಡಳಿತ ಮಂಡಳಿಗೆ ಚುನಾವಣೆ ನಡೆದು ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವವರೆಗೆ ಈ ಎರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಹಕಾರ ಇಲಾಖೆ.

PR-225

ಕರ್ನಾಟಕ ಸರ್ಕಾರ

ಸಂಖ್ಯೆ: UDD/79/MNX/2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, 4ನೇ ಮಹಡಿ,
ಡಾ|| ಬಿ. ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:25-06-2026

ಮಾರ್ಪಾಡು ಆದೇಶ

ಸರ್ಕಾರದ ಆದೇಶ ಸಂಖ್ಯೆ: ನಅಇ 79 ಬೆಂಭೂಸ್ವಾ 2024(ಇ) ದಿನಾಂಕ:23.07.2024 ರಲ್ಲಿ ಬೆಂಗಳೂರು ಪಿಆರ್‌ಆರ್ ಡೆವಲಪ್‌ಮೆಂಟ್ ಕಾರ್ಪೊರೇಷನ್ ಲಿಮಿಟೆಡ್ ಕಂಪನಿಯ ಹೆಸರನ್ನು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್ (Bengaluru Business Corridor Limited) ಎಂದು ಮಾರ್ಪಡಿಸಿ ಹಾಗೂ ಮಂಡಳಿಯ ನಿರ್ದೇಶಕ ಮಂಡಳಿಯನ್ನು ಪುನರ್ ರಚಿಸಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 168 ಬೆಂಭೂಸ್ವಾ 2024(ಇ) ದಿನಾಂಕ:21.10.2024 ರಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಅಇ 79 ಬೆಂಭೂಸ್ವಾ 2024(ಇ) ದಿನಾಂಕ:23.07.2024 ರ ಆದೇಶವನ್ನು ಭಾಗಶಃ ಮಾರ್ಪಡಿಸಿ, ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್ (Bengaluru Business Corridor Limited) ಮಂಡಳಿಯ ಅಧ್ಯಕ್ಷರನ್ನಾಗಿ "ಬೆಂಗಳೂರು ಅಭಿವೃದ್ಧಿ ಸಚಿವರು" ಇವರ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಬದಲಾಗಿ ಶ್ರೀ ಎಲ್. ಕೆ ಅತೀಕ್, ಭಾ.ಆ.ಸೇ ಇವರನ್ನು ಅಧ್ಯಕ್ಷ ಸ್ಥಾನಕ್ಕೆ ನೇಮಿಸಿ ಆದೇಶಿಸಲಾಗಿರುತ್ತದೆ.

ಮೇಲ್ಕಂಡ ಸರ್ಕಾರದ ಆದೇಶ ಸಂಖ್ಯೆ: ನಅಇ 79 ಬೆಂಭೂಸ್ವಾ 2024(ಇ) ದಿನಾಂಕ:23.07.2024 ರ ಆದೇಶ ಭಾಗದಲ್ಲಿನ ಮಂಡಳಿಯ ನಿರ್ದೇಶಕರುಗಳ ಪೈಕಿ ಕ್ರಮ ಸಂಖ್ಯೆ: 3 ರಲ್ಲಿರುವ **"ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ"** ಇವರ ಬದಲಾಗಿ **"ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ"** ಎಂದು ಮಾರ್ಪಡಿಸಿ ಆದೇಶಿಸಿದೆ.

ಮುಂದುವರೆದು ಸದರಿ ಆದೇಶದ ಕ್ರಮ ಸಂಖ್ಯೆ: 5 ರಲ್ಲಿರುವ **"ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ"** ಇವರ ಬದಲಾಗಿ **"ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ"** ಎಂದು ತಿದ್ದಿಪಡಿ ಮಾಡಿ ಆದೇಶಿಸಿದೆ.

ಉಳಿದಂತೆ ಮೇಲಿನ ಆದೇಶಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಜೇಶ್ ಎಸ್ ಸೂಳಿಕೇರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.
(ಬಿಡಿಎ & ಬೆಂಗಳೂರು-1)

PR-226

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59.